**ದಿನಾಂಕಃ 09.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಲಾಯಿತು**

**ಮುಂದುವರೆದ ಪಾಟೀ ಸವಾಲು ಪ್ರತಿವಾದಿಗಳ ಪರ ಶ್ರೀ ಆರ್.ಬಿ.ಕೆ.ಈ. ವಕೀಲರಿಂದಃ**

6. ನಮ್ಮ ಊರಿನಲ್ಲಿ ಜಮೀನಿನ ಮೌಲ್ಯ ಪ್ರತಿ ಎಕರೆಗೆ 20-30 ಲಕ್ಷ ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿ ಎಕರೆಗೆ ಎಷ್ಟು ಇರುತ್ತದೆ ಎಂದು ನನಗೆ ಗೊತ್ತಿಲ್ಲ. ನಮ್ಮ ಜಮೀನಿನಲ್ಲಿ ವಿಂಡಪವರ್ ಅಳವಡಿಸಲು ಬಂದಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ವಿಂಡಪವರ ಕಂಪನಿಯವರು 1 ½ ಕೋಟಿ ಹಣ ನೀಡಿ ನಮ್ಮ ಜಮೀನನ್ನು ಕಬ್ಜಾ ಪಡೆದುಕೊಳ್ಳಲು ಬಂದಿರುತ್ತಾರೆ ಎಂದರೆ ಸರಿಯಲ್ಲ. ಬ್ಯಾಕೋಡ ಊರಿನವರು ನಮ್ಮ ಊರಿಗೆ ಬಂದು ಪ್ರಕರಣ ಹಿಂಪಡೆದುಕೊಳ್ಳಿ ಹಣ ನೀಡುತ್ತಾರೆ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಬ್ಯಾಕೋಡ ಊರಿನವರು ನಮ್ಮ ಊರಿಗೆ ಬಂದಿರುವುದಿಲ್ಲ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

7. ನನ್ನ ಅಣ್ಣ 25 ಲಕ್ಷ ರೂಪಾಯಿ ನಗದು ಹಣ ನೀಡಿದಕ್ಕೆ ತನ್ನ ಹಕ್ಕು ಬಿಟ್ಟುಕೊಟ್ಟಿರುತ್ತಾನೆ ಎಂದರೆ ಸರಿಯಲ್ಲ. ನಾನು ಹಣ ಮತ್ತು ಬಂಗಾರವನ್ನು ತೆಗೆದುಕೊಂಡಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಹಣ ಮತ್ತು ಬಂಗಾರವನ್ನು ತೆಗೆದುಕೊಂಡಿದ್ದಕ್ಕೆ ಬ್ಯಾಕೋಡ ಊರಿನವರು ನಮ್ಮ ಊರಿಗೆ ಬಂದು ಪ್ರಕರಣ ಹಿಂಪಡೆದುಕೊಳ್ಳಿ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಹಣ ಪಡೆದುಕೊಂಡಿದ್ದರು ಸಹ ಪ್ರತಿವಾದಿಯರಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. 4 ಜಮೀನಿನ ಸರ್ವೆ ನಂಬರ ನನಗೆ ಹೇಳಲ ಬರುವುದಿಲ್ಲ, ನಾನು ವಿದ್ಯಾಭ್ಯಾಸ ಮಾಡಿಲ್ಲ ಎಂದು ನುಡಿಯುತ್ತಾರೆ.

8. ದಾವಾ ಆಸ್ತಿಯ ಎಲ್ಲಿ ಇರುತ್ತದೆ ಎಂದರೆ ಸಾಕ್ಷಿಯು ಬ್ಯಾಕೋಡದಲ್ಲಿ ಇರುತ್ತದೆ. ಚಕಬಂದಿ ನನಗೆ ಹೇಳಲು ಬರುವುದಿಲ್ಲ. ಹಣ ಮತ್ತು ಬಂಗಾರ ತೆಗೆದುಕೊಂಡಿದ್ದರಿಂದ ನನಗೆ ಆಸ್ತಿ ಬಗ್ಗೆ

ಗೊತ್ತಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯರಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ ಅಮಿತ್ ಘಟ್ಟಿ)**
**ದಿವಾಣಿ ನ್ಯಾಯಾಧೀಶರು ಮತ್ತು**
**ನ್ಯಾಯಿಕ ದಂಡಾಧಿಕಾರಿಗಳು**
**ಬಸವನ ಬಾಗೇವಾಡಿ.**